ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 361 |
| ಸದಸ್ಯರ ಹೆಸರು | : | ಡಾ: ಕೆ. ಗೋವಿಂದರಾಜ್<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 21-12-2022 |
| ಉತ್ತರಿಸುವ ಸಚಿವರು | : | ಲೋಕೋಪಯೋಗಿ ಸಚಿವರು |

<table>
<tr><th>ಕ್ರಮ ಸಂಖ್ಯೆ</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಕಳೆದ 3 ವರ್ಷಗಳಲ್ಲಿ ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸಂಭವಿಸಿದ ಅಪಘಾತಗಳೆಷ್ಟು: (ಗಂಭೀರ ಹಾಗೂ ಮಾರಣಾಂತಿಕ ಅಪಘಾತಗಳು) ಈ ಅಪಘಾತಗಳಲ್ಲಿ ಮೃತಪಟ್ಟ ಹಾಗೂ ಗಾಯಗೊಂಡವರ ಸಂಖ್ಯೆ ಎಷ್ಟು:</td><td>ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯ ವ್ಯಾಪ್ತಿಯಲ್ಲಿರುವ ಹೆದ್ದಾರಿಗಳಲ್ಲಿ ಕಳೆದ 3 ವರ್ಷಗಳಿಂದ ಸಂಭವಿಸಿದ ಅಪಘಾತಗಳ ವಿವರಗಳು ಈ ಕೆಳಕಂಡಂತಿದೆ.<br><br><table><tr><th>Dept.</th><th>No. of accidents</th><th>No. of deaths</th><th>No. of Injuries</th></tr><tr><td>NHAI</td><td>17740</td><td>2909</td><td>14831</td></tr><tr><td>NH</td><td>12050</td><td>2333</td><td>9717</td></tr><tr><td>Total</td><td>29790</td><td>5242</td><td>24548</td></tr></table></td></tr>
<tr><td>ಆ)</td><td>ಪ್ರಯಾಣಿಕರಿಗೆ ರಾಷ್ಟ್ರೀಯ ಹೆದ್ದಾರಿಗಳು ಸಾವಿನ ರಹದಾರಿಗಳಾಗಿದ್ದು. ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಆಗುವ ಅಪಘಾತಗಳಿಗೆ ಕಾರಣಗಳೇನು:</td><td>ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸಂಚರಿಸುವ ವಾಹನಗಳ ಸಂಚಾರದಟ್ಟಣೆ, ಪಾನಮತ್ತ ಚಾಲನೆ, ಅತಿಯಾದ ವೇಗ, ಯಾಂತ್ರಿಕ ವೈಫಲ್ಯ ಹಾಗೂ ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸದಿರುವುದು ಅಪಘಾತಕ್ಕೆ ಕಾರಣವಾಗಿರುತ್ತದೆ.</td></tr>
<tr><td>ಇ)</td><td>ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸುತ್ತಿರುವ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ದೀರ್ಘಾವಧಿ ಕ್ರಮಗಳೇನು? (ಸಂಪೂರ್ಣ ವಿವರಗಳನ್ನು ನೀಡುವುದು)</td><td>ರಾಷ್ಟ್ರೀಯ ಹೆದ್ದಾರಿ ವಲಯ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾರ್ಯ ವ್ಯಾಪ್ತಿಯಲ್ಲಿರುವ ಹೆದ್ದಾರಿಗಳಲ್ಲಿ ಸಂಭವಿಸಿರುವ 3 ವರ್ಷಗಳ ಅಪಘಾತ ವರದಿಯನ್ನು ಪಡೆದು, ಹೆಚ್ಚಿನ ಅಪಘಾತಗಳು ಸಂಭವಿಸುತ್ತಿರುವ ಸ್ಥಳಗಳನ್ನು ಬ್ಲ್ಯಾಕ್‌ಸ್ಪಾಟ್ ಎಂದು ಗುರುತಿಸಲಾಗುತ್ತದೆ, ಈ ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ಸಂಭವಿಸುತ್ತಿರುವ ಅಪಘಾತಗಳನ್ನು ತಗ್ಗಿಸಲು ಅಲ್ಪಾವಧಿ ಕಾಲದ ಹಾಗೂ ದೀರ್ಘಾವಧಿ ಕ್ರಮಗಳಾದ ರಸ್ತೆ ತಿರುವು ಸುಧಾರಣೆ, ರಕ್ಷಣಾತ್ಮಕ ತಡೆಗೋಡೆ ನಿರ್ಮಾಣ, ರೋಡ್ ಸ್ಟಡ್, ರೋಡ್ ಮಾರ್ಕಿಂಗ್, ಸೂಚನಾ ಫಲಕಗಳ ಅಳವಡಿಕೆ ಹಾಗೂ ಇನ್ನಿತರೆ ರಸ್ತೆ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>ರಾಷ್ಟ್ರೀಯ ಹೆದ್ದಾರಿ ವಲಯ ವ್ಯಾಪ್ತಿಯಲ್ಲಿ<br>ಕೇಂದ್ರ ಭೂಸಾರಿಗೆ ಮಂತ್ರಾಲಯದಿಂದ ಹಾಗೂ ರಾಜ್ಯ ಸರ್ಕಾರದಿಂದ ಮೂರು ವರ್ಷಗಳ ಅಪಘಾತಗಳ</td></tr>
</table>

| | | |
|---|---|---|
| | | ವರದಿಯನ್ನು ಪರಿಗಣಿಸಿ 183 ಸ್ಥಳಗಳನ್ನು ಬ್ಲ್ಯಾಕ್‌ಸ್ಪಾಟ್ ಎಂದು ಗುರುತಿಸಲಾಗಿದ್ದು, ಈ ಪೈಕಿ 139 ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ದೀರ್ಘಾವಧಿ ಕಾಲದ ಹಾಗೂ ಅಲ್ಪಾವಧಿ ಕಾಲದ ಸುರಕ್ಷತಾ ಕ್ರಮಗಳನ್ನು ವಹಿಸಲಾಗಿದೆ. 11 ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ಸುರಕ್ಷತಾ ಕಾರ್ಯ ಪ್ರಗತಿಯಲ್ಲಿದೆ. 15 ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ಸುರಕ್ಷತಾ ಕಾರ್ಯ ಕೈಗೊಳ್ಳಲು ಅಂದಾಜು ಪಟ್ಟಿಯನ್ನು ಅನುಮೋದನೆಗಾಗಿ ಕೇಂದ್ರ ಭೂಸಾರಿಗೆ ಮಂತ್ರಾಲಯಕ್ಕೆ ಕಳುಹಿಸಲಾಗಿದೆ. 15 ಬ್ಲ್ಯಾಕ್‌ಸ್ಪಾಟ್ ಸ್ಥಳಗಳನ್ನು ಸುರಕ್ಷತಾ ಕಾರ್ಯ ಕೈಗೊಳ್ಳಲು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಹಸ್ತಾಂತರಿಸಲಾಗಿದೆ. 03 ಬ್ಲ್ಯಾಕ್‌ಸ್ಪಾಟ್ ಸ್ಥಳಗಳನ್ನು ಸುರಕ್ಷತಾ ಕಾರ್ಯ ಕೈಗೊಳ್ಳಬೇಕಾಗಿದೆ.<br><br>**ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ**<br>• 2011-14 ಮತ್ತು 2016-18ನೇ ಸಾಲಿನಲ್ಲಿ ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಸಂಬಂಧಿಸಿದಂತೆ ಕೇಂದ್ರ ಭೂಸಾರಿಗೆ ಮಂತ್ರಾಲಯದಿಂದ 450 ಸ್ಥಳಗಳನ್ನು ಬ್ಲ್ಯಾಕ್‌ಸ್ಪಾಟ್ ಎಂದು ಗುರುತಿಸಲಾಗಿದ್ದು, ದೀರ್ಘಾವಧಿ ಕಾಲದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>• ಮುಂದುವರೆದು, ಕಳೆದ 3 ವರ್ಷಗಳಲ್ಲಿ ಸಂಭವಿಸಿದ ಅಪಘಾತಗಳ ವರದಿಯನ್ನಾಧರಿಸಿ ಕೇಂದ್ರ ಭೂಸಾರಿಗೆ ಮಂತ್ರಾಲಯದಿಂದ 162 ಸ್ಥಳಗಳನ್ನು ಬ್ಲ್ಯಾಕ್‌ಸ್ಪಾಟ್ ಎಂದು ಗುರುತಿಸಲಾಗಿದ್ದು, ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ವರದಿಸಿರುತ್ತಾರೆ. |

ಕಡತ ಸಂಖ್ಯೆ: ಲೋಇ 430 ಸಿಎನ್‌ಹೆಚ್ 2022 (ಇ)

(ಸಿ.ಸಿ. ಪಾಟೀಲ)
ಲೋಕೋಪಯೋಗಿ ಸಚಿವರು